# ಕೆರೆ ನಿರ್ವಹಣೆ– ಒಂದೇ ಇಲಾಖೆಗೆ ಹೊಣೆ

**ಬೆಂಗಳೂರು ನಗರದ** ಎಲ್ಲ ಕೆರೆಗಳ ನಿರ್ವಹಣೆ ಹೊಣೆಯನ್ನು ಒಂದೇ ಇಲಾಖೆಗೆ ವಹಿಸಲು ಚಿಂತನೆ ನಡೆಸಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.



ಟಿ.ವಿ. ರಾಮಚಂದ್ರ

‘ಬಿಬಿಎಂಪಿ ಕೆಲವು ಕೆರೆಗಳ ನಿರ್ವಹಣೆ ಮಾಡುತ್ತಿದೆ. ಇನ್ನು ಕೆಲವನ್ನು ಬಿಡಿಎ ನೋಡಿಕೊಳ್ಳುತ್ತಿದೆ. ಎಲ್ಲ ಕೆರೆಗಳ ನಿರ್ವಹಣೆ ಹೊಣೆಯನ್ನು ಕೆರೆ ಅಭಿವೃದ್ಧಿ ಪ್ರಾಧಿಕಾರಕ್ಕೆ ವಹಿಸಬೇಕು’ ಎಂದು ಭಾರತೀಯ ವಿಜ್ಞಾನ ಸಂಸ್ಥೆಯ ವಿಜ್ಞಾನಿ ಪ್ರೊ. ಟಿ.ವಿ. ರಾಮಚಂದ್ರ ಒತ್ತಾಯಿಸಿದರು. ಹಲವು ಇಲಾಖೆಗಳು ಹೊಣೆ ಹೊತ್ತಿರುವುದರಿಂದ ಸಮಸ್ಯೆಯಾಗುತ್ತಿರುವುದು ನಿಜ ಎಂದು ಸಿದ್ದರಾಮಯ್ಯ ಒಪ್ಪಿಕೊಂಡರು. ‘ಈ ಹೊಣೆಯನ್ನು ಒಂದೇ ಇಲಾಖೆಗೆ ವಹಿಸಿ ಹೆಚ್ಚುವರಿ ಸಿಬ್ಬಂದಿಯನ್ನು ನಿಯೋಜಿಸಲಾಗುವುದು’ ಎಂದು ಭರವಸೆ ನೀಡಿದರು. ಕೊಳಚೆ ನೀರು ಸೇರುತ್ತಿರುವುದರಿಂದ ಜಲಮೂಲಗಳು ಮಲಿನಗೊಳ್ಳುತ್ತಿವೆ. ಇದನ್ನು ತಡೆಗಟ್ಟಲು ಕೊಳಚೆ ನೀರು ಸಂಸ್ಕರಣಾ ಘಟಕಗಳನ್ನು ನಿರ್ಮಿಸಲು ಹೆಚ್ಚಿನ ಒತ್ತು ನೀಡಿದ್ದೇವೆ’ ಎಂದು ತಿಳಿಸಿದರು.